# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 402
ಸದಸ್ಯರ ಹೆಸರು : ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ),
ಉತ್ತರಿಸಬೇಕಾದ ದಿನಾಂಕ : 07-12-2023
ಉತ್ತರಿಸಬೇಕಾದ ಸಚಿವರು : ಮುಖ್ಯಮಂತ್ರಿ

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸರ್ಕಾರಿ ನೌಕರರಿಗೆ ವೇತನ ಪರಿಷ್ಕೃತವಾಗಿ 7ನೇ ವೇತನ ಆಯೋಗ ರಚಿಸಿದ್ದು ಯಾವಾಗ; ಹಾಗೂ ನೀಡಿರುವ ಮಾರ್ಗಸೂಚಿಗಳೇನು; | ರಾಜ್ಯ ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಕುರಿತಂತೆ, ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ದಿನಾಂಕ:19-11-2022ರ ಸರ್ಕಾರಿ ಆದೇಶ ಸಂಖ್ಯೆ:ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶಿಸಲಾಗಿರುತ್ತದೆ.<br>ಆಯೋಗವು ತನ್ನ ಶಿಫಾರಸ್ಸುಗಳನ್ನು ಮಾಡುವಲ್ಲಿ, ರಾಜ್ಯ ಸಂಪನ್ಮೂಲಗಳು ಹಾಗೂ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತಾಗಿ ರಾಜ್ಯ ಸರ್ಕಾರದ ಹೊಣೆಗಳು, ಶಾಸನಬದ್ಧ ಹಾಗೂ ಕ್ರಮಬದ್ಧ ಕಾರ್ಯಗಳು, ಋಣಸೇವಾ ನಿರ್ವಹಣೆಗಳು ಮತ್ತು ಇತರೆ ಅಭಿವೃದ್ಧಿಯೇತರ ಅಗತ್ಯಗಳನ್ನು ಹಾಗೂ ವಿತ್ತೀಯ ಹೊಣೆಗಾರಿಕೆ ಪರಿಮಿತಿಯನ್ನು ಗಮನದಲ್ಲಿರಿಸಿಕೊಳ್ಳುವಂತೆ ತಿಳಿಸಿದ್ದು ಆಯೋಗವು ತನ್ನದೇ ಆದ ಕಾರ್ಯವಿಧಾನವನ್ನು ರೂಪಿಸಿಕೊಳ್ಳುವ ಅವಕಾಶ ನೀಡಲಾಗಿರುತ್ತದೆ. |
| (ಆ) | 7ನೇ ವೇತನದ ಅವಧಿಯನ್ನು ಯಾವ ಕಾಲಮಿತಿಯೊಳಗೆ ನೀಡಲು ತಿಳಿಸಲಾಗಿತ್ತು. ಈ ದಿನಾಂಕವನ್ನು ವಿಸ್ತರಿಸಲು ಕಾರಣಗಳೇನು; | ದಿನಾಂಕ:19-11-2022ರ ಸರ್ಕಾರಿ ಆದೇಶ ಸಂಖ್ಯೆ:ಆಇ 45 ಎಸ್.ಆರ್.ಪಿ 2022ರಲ್ಲಿ 6 ತಿಂಗಳ ಒಳಗಾಗಿ ವರದಿಯನ್ನು ಸಲ್ಲಿಸುವಂತೆ ಆದೇಶಿಸಲಾಗಿತ್ತು. ವೇತನ ಪರಿಷ್ಕರಣೆ ಕುರಿತಂತೆ ಸರ್ಕಾರದ |

| | | |
|---|---|---|
| | | ವಿವಿಧ ಇಲಾಖೆ/ ಸಂಸ್ಥೆಗಳೊಂದಿಗೆ ವೇತನ ಆಯೋಗದ ಸಮಾಲೋಚನಾ ಕಾರ್ಯಗಳು ಪ್ರಗತಿಯಲ್ಲಿರುವುದರಿಂದ ವೇತನ ಆಯೋಗದ ಕಾಲಾವಧಿಯನ್ನು ದಿನಾಂಕ:15.03.2024ರ ವರೆವಿಗೆ ವಿಸ್ತರಿಸಿ ಆದೇಶಿಸಲಾಗಿರುತ್ತದೆ. |
| (ಇ) | ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗ ವರದಿ ವಿಳಂಬವಾಗಿದ್ದು, ನೀಡಲಾಗುತ್ತಿರುವ ಮಧ್ಯಂತರ ಪರಿಹಾರವೆಷ್ಟು; ಹಾಗೂ ಯಾವ ದಿನಾಂಕದಿಂದ ಈ ಮಧ್ಯಂತರ ಪರಿಹಾರ ನೀಡಲಾಗಿರುತ್ತದೆ; | ದಿನಾಂಕ:01-03-2023ರ ಸರ್ಕಾರಿ ಆದೇಶ ಸಂಖ್ಯೆ:ಆಇ 7 ಎಸ್.ಆರ್.ಪಿ 2023ರಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ದಿನಾಂಕ:01-04-2023 ರಿಂದ ಅನ್ವಯವಾಗುವಂತೆ ಶೇ.17ರಷ್ಟು ತಾತ್ಕಾಲಿಕ ಮಧ್ಯಂತರ ಪರಿಹಾರವನ್ನು ಮಂಜೂರು ಮಾಡಿರುತ್ತದೆ. |
| (ಈ) | ಸದರಿ ವರದಿಯನ್ನು ಡಿಸೆಂಬರ್ 2023ರ ಒಳಗೆ ಪಡೆದುಕೊಂಡು ಅನುಷ್ಠಾನಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು? | ಪ್ರಸ್ತುತ ರಾಜ್ಯ ಸರ್ಕಾರವು ವೇತನ ಆಯೋಗದ ಅಂತಿಮ ವರದಿಯ ನಿರೀಕ್ಷೆಯಲ್ಲಿರುತ್ತದೆ. |

ಸಂಖ್ಯೆ: ಆಇ 27 ಎಸ್‌ಆರ್‌ಪಿ 2023

(ಸಿದ್ದರಾಮಯ್ಯ)
ಮುಖ್ಯಮಂತ್ರಿ